ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

# ಮಲತ್ಯಾಜ್ಯ ನಿರ್ವಹಣಾ ಘಟಕ ಪರಿಸರಕ್ಕೆ ಪೂರಕ

ಉಡುಪಿ ಜಿಲ್ಲೆಯ ಉಡುಪಿ ತಾಲ್ಲೂಕಿನ 80 ಬಡಗಬೆಟ್ಟು ಗ್ರಾಮ ಪಂಚಾಯತಿಯಲ್ಲಿ ಸುಮಾರು 1500 ಕುಟುಂಬಗಳಿವೆ. 80 ಬಡಗಬೆಟ್ಟು ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಏಕ ಗುಂಡಿಯ ಶೌಚಾಲಯಗಳ (Single pit toilet) ಸಂಖ್ಯೆ ಹೆಚ್ಚಿದೆ. ಆದ್ದರಿಂದ ಶೌಚಾಲಯಗಳ ಗುಂಡಿ ಭರ್ತಿಯಾದ ನಂತರ ಅದರ ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಸೂಕ್ತ ಸೌಲಭ್ಯವಿರಲಿಲ್ಲ.




**ಮಲ ತ್ಯಾಜ್ಯ ನಿರ್ವಹಣಾ ಘಟಕ ಏಕೆ ಬೇಕು?**

ಮಲ ತ್ಯಾಜ್ಯ ನಿರ್ವಹಣೆಯು ಮಲ ತ್ಯಾಜ್ಯದ ವೈಜ್ಞಾನಿಕ ಸಂಗ್ರಹಣೆ, ಸಾಗಾಣಿಕೆ, ಸಂಸ್ಕರಣೆ ಮತ್ತು ಸುರಕ್ಷಿತ ವಿಲೇವಾರಿಯನ್ನು ಒಳಗೊಂಡಿದೆ. ಏಕ ಗುಂಡಿ ಶೌಚಾಲಯ ಹೆಚ್ಚಿರುವ ಸ್ಥಳಗಳಲ್ಲಿ ಮಲ ತ್ಯಾಜ್ಯ ನಿರ್ವಹಣಾ ಘಟಕಗಳು ಪ್ರಮುಖ ಪಾತ್ರ ವಹಿಸುತ್ತವೆ. ಮಲ ತ್ಯಾಜ್ಯವು ನದಿ ಮುಂತಾದ ನೀರಿನ ಮೂಲಗಳನ್ನು ಸೇರಿ ಉಂಟಾಗುವ ಮಾಲಿನ್ಯವನ್ನು ಮಲ ತ್ಯಾಜ್ಯ ನಿರ್ವಹಣಾ ಘಟಕಗಳು ತಪ್ಪಿಸುತ್ತದೆ.



ಆದ್ದರಿಂದ ಉಡುಪಿ ತಾಲ್ಲೂಕು ವ್ಯಾಪ್ತಿಯ 16 ಗ್ರಾಮ ಪಂಚಾಯತಿಗಳಿಗೆ ಅನುಕೂಲವಾಗುವಂತೆ ಉಡುಪಿ ಜಿಲ್ಲೆಯ ಮೊದಲ ಮಲತ್ಯಾಜ್ಯ ಸಂಸ್ಕರಣಾ ಘಟಕವನ್ನು 80 ಬಡಗಬೆಟ್ಟು ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ನಿರ್ಮಾಣ ಮಾಡಲಾಗಿದೆ. ಈ ಘಟಕ ನಿರ್ಮಾಣಕ್ಕೆ ಸ್ವಚ್ಛಭಾರತ್ ಮಿಷನ್ (ಗ್ರಾ) ಯೋಜನೆ ಹಾಗೂ ಇತರೆ ಅನುದಾನ ಸೇರಿದಂತೆ ಸುಮಾರು 74.78ಲಕ್ಷಮೊತ್ತವನ್ನು ವ್ಯಯಮಾಡಲಾಗಿದೆ. ಮನೆ, ಸಂಸ್ಥೆಗಳು, ವಾಣಿಜ್ಯ ಕೇಂದ್ರಗಳಿಂದ ಮಲತ್ಯಾಜ್ಯವನ್ನು ಸಂಗ್ರಹಿಸಿ ಅದನ್ನು ಸಾವಯವ ಗೊಬ್ಬರವನ್ನಾಗಿ ಪರಿವರ್ತಿಸಿ ರೈತರಿಗೆ ಒದಗಿಸುವ ಮೂಲಕ ಮಲ ತ್ಯಾಜ್ಯವನ್ನು ಪರಿಸರಕ್ಕೆ ಹಾನಿಯಾಗದಂತೆ ವೈಜ್ಞಾನಿಕವಾಗಿ ನಿರ್ವಹಣೆ ಮಾಡುವುದು ಪ್ರಮುಖ ಉದ್ದೇಶವಾಗಿದೆ.

ಘಟಕ ನಿರ್ಮಾಣ ಮಾಡಲು ಯೋಜನೆ ತಯಾರಿಸುವಾಗ ಮೊದಲಿಗೆ ಗ್ರಾಮಸ್ಥರು ಇದಕ್ಕೆ ವಿರೋಧ ವ್ಯಕ್ತಪಡಿಸಿದರು. ಘಟಕ ನಿರ್ಮಾಣದಿಂದ ಗ್ರಾಮದ ಪರಿಸರ ಹಾಳಾಗುತ್ತದೆ, ವಾಸನೆ ಹೆಚ್ಚಿ ವಾಸ ಮಾಡುವುದು ಕಷ್ಟವಾಗುತ್ತದೆ ಎಂದು ಅವರು ತಪ್ಪು ತಿಳಿದಿದ್ದರು.




ಗ್ರಾಮಸ್ಥರಿಂದ ಈ ತಪ್ಪು ಕಲ್ಪನೆಗಳನ್ನು ಹೋಗಲಾಡಿಸಲು ವಿವಿಧ ಐ.ಇ.ಸಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಯಿತು. ಗ್ರಾಮದಲ್ಲಿ ಮನೆ ಮನೆ ಭೇಟಿ, ಸಭೆ ಆಯೋಜನೆ ಮುಂತಾದ ಚಟುವಟಿಕೆಗಳ ಮೂಲಕ ಅವರಲ್ಲಿ ಘಟಕದ ಮಹತ್ವದ ಕುರಿತು ಅರಿವು ಮೂಡಿಸಲಾಯಿತು.

ಗ್ರಾಮ ಪಂಚಾಯಿತಿ ಚುನಾಯಿತ ಪ್ರತಿನಿಧಿಗಳು, ವಿ.ಡಬ್ಲ್ಯೂ.ಎಸ್.ಸಿ. ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗ  ಸಮಿತಿ, ಸ್ವಸಹಾಯ ಸಂಘಗಳು ಮತ್ತು ಸ್ಥಳೀಯ ನಾಯಕರ ಸಹಕಾರ ಘಟಕ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸಿದೆ.

ಈ ಯೋಜನೆಯ ಯಶಸ್ಸಿನ ನಂತರ ಇದೇ ಮಾದರಿಯ ಘಟಕಗಳನ್ನು ನಿರ್ಮಾಣ ಮಾಡಲು ಪ್ರಸ್ತಾವನೆ ಸಿದ್ದಪಡಿಸಲಾಗುತ್ತಿದೆ, ಈಗಾಗಲೇ ಕಾರ್ಕಳ ತಾಲ್ಲೂಕಿನಲಿ ಘಟಕ ನಿರ್ಮಾಣ ಮಾಡಲಾಗುತ್ತಿದ್ದು ಕಾರ್ಯಾರಂಭವಾಗಬೇಕಾಗಿದೆ,  ಹೆಬ್ರಿಯಲ್ಲಿ ಘಟಕ ಸ್ಥಾಪನೆಗೆ ಯೋಜನಾ ವರದಿ ಸಿದ್ದಪಡಿಸಿ ಸಲ್ಲಿಸಿದೆ.

"80 ಬಡಗಬೆಟ್ಟು ಗ್ರಾಮ ಪಂಚಾಯಿತಿಯಲ್ಲಿ ನಿರ್ಮಾಣವಾಗಿರುವ ಮಲತ್ಯಾಜ್ಯ ಸಂಸ್ಕಾರಣಾ ಘಟಕದಲ್ಲಿ ಅತ್ಯಂತ ವೈಜ್ಞಾನಿಕವಾಗಿ ಮಲತ್ಯಾಜ್ಯ ವಿಲೇವಾರಿ ಮಾಡಲಾಗುತ್ತಿದೆ. ಗ್ರಾಮೀಣ ಭಾಗದಲ್ಲಿ ಈ ರೀತಿಯ ಸೇವೆ ಆರಂಭವಾಗಿರುವುದು ಉಡುಪಿ ಜಿಲ್ಲೆಯಲ್ಲೇ ಪ್ರಥಮ. 80 ಬಡಗಬೆಟ್ಟು ಗ್ರಾಮ ಪಂಚಾಯಿತಿ ಹಾಗೂ ಉಡುಪಿ ತಾಲ್ಲೂಕಿನ 13 ಗ್ರಾ.ಪಂ. ಗಳು ಇದರ ಸೇವೆ ಪಡೆಯಬಹುದು" ಜಿ.ಪಂ ಸಿ.ಪಿ.ಓ ಅಭಿಪ್ರಾಯ ವ್ಯಕ್ತ ಪಡಿಸುತ್ತಾರೆ.

ಒಟ್ಟಿನಲ್ಲಿ ಮಲತ್ಯಾಜ್ಯ ನಿರ್ವಹಣಾ ಘಟಕದ ನಿರ್ಮಾಣದಿಂದ ಪರಿಸರ ಮಾಲಿನ್ಯ ಕಡಿಮೆಯಾಗುತ್ತದೆ. ಇದು ತ್ಯಾಜ್ಯವನ್ನು ಸಂಪನ್ಮೂಲವಾಗಿ ಮಾರ್ಪಡಿಸುವ ವಿಧಾನವಾಗಿದೆ. ತ್ಯಾಜ್ಯವನ್ನು ಗೊಬ್ಬರವನ್ನಾಗಿಸಿ ರೈತರಿಗೆ ಹಂಚಬಹುದು. ಈ ಮೂಲಕ ಗ್ರಾಮದ ಸುಸ್ಥಿರ ಅಭಿವೃದ್ಧಿ ಸಾಧ್ಯವಾಗುತ್ತದೆ.

**ನೀರು ಮತ್ತು ನೈರ್ಮಲ್ಯ ಕುರಿತ ಸಮಸ್ಯೆಗಳಿಗೆ**
**ಪರಿಹಾರ ಸಹಾಯವಾಣಿ 9480985555 ಗೆ ಕರೆ ಮಾಡಿ**